**All India Radio: Bangalore**
**Regional Bulletin In Kannada**
**06.12.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಇಂದು ಡಾ. ಬಿ.ಆರ್. ಅಂಬೇಡ್ಕರ್ ಪರಿನಿರ್ವಾಣ ದಿನ ; ರಾಜ್ಯದೆಲ್ಲೆಡೆ ಸಂವಿಧಾನ ಶಿಲ್ಪಿಯ ಸ್ಮರಣೆ
2. ರಾಜ್ಯದಲ್ಲಿ ಉತ್ತಮ ಕಾನೂನು ವ್ಯವಸ್ಥೆ ; ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ
3. ಕನಿಷ್ಠ ಬೆಂಬಲ ಬೆಲೆಯನ್ನು ಕಾರ್ಯರೂಪಕ್ಕೆ ತರುವುದು ರಾಜ್ಯ ಸರ್ಕಾರದ ಕರ್ತವ್ಯ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
4. ವಿಜಯನಗರದಲ್ಲಿ ತುಂಗಭದ್ರಾ ಜಲಾಶಯದ ೩೩ ಹೊಸ ಗೇಟ್‌ಗಳ ಅಳವಡಿಕೆಗೆ ಚಾಲನೆ

<><><><>

ಅಂಬೇಡ್ಕರ್ ದೇಶ ಕಂಡ ಒಬ್ಬ ಅಪರೂಪದ ನಾಯಕ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಯಪಟ್ಟಿದ್ದಾರೆ. ಬೆಂಗಳೂರಿನ ವಿಧಾನಸೌಧದಲ್ಲಿಂದು ಡಾ.ಬಿ.ಆರ್. ಅಂಬೇಡ್ಕರ್ ಅವರ ೬೯ನೇ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಅವರ ಪ್ರತಿಮೆಗೆ ಮುಖ್ಯಮಂತ್ರಿ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ದೇಶದಲ್ಲಿ ಸಾಮಾಜಿಕ ನ್ಯಾಯ ಸಿಗದವರ ವಿರುದ್ಧ ಅಂಬೇಡ್ಕರ್ ಹೋರಾಟ ನಡೆಸಿದ್ದರು. ದೇಶದ ಸಾಮಾಜಿಕ ವ್ಯವಸ್ಥೆ ಬದಲಾವಣೆಯಾಗಬೇಕು. ಎಲ್ಲರಿಗೂ ಸಮಾನ ಅವಕಾಶಗಳು ದೊರಕಬೇಕು ಹಾಗೂ ಸಾಮಾಜಿಕ ನ್ಯಾಯ ಸ್ಥಾಪನೆಯಾಗಬೇಕು ಎಂದು ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಸ್ಪಷ್ಟವಾಗಿ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳಲ್ಲಿ ಮಕ್ಕಳಿಗೆ ಸಂವಿಧಾನದ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

<><><><>

ರಾಜ್ಯದ ಹಲವೆಡೆ ಇಂದು ಭಾರತ ರತ್ನ, ಸಂವಿಧಾನ ಶಿಲ್ಪಿ, ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ೬೯ನೇ ಪರಿನಿರ್ವಾಣ ದಿನವನ್ನು ಆಚರಿಸಲಾಯಿತು. ಮಂಡ್ಯದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮಾಲಾರ್ಪಣೆ ಮಾಡಿದರು. ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ೬೯ನೇ ಪುಣ್ಯ ಸ್ಮರಣೆ ಯನ್ನು ಮಹಾ ಪರಿನಿರ್ವಾಣ ದಿನವನ್ನಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯೂ ಆಚರಿಸಲಾಯಿತು. ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ದೇಶಕ್ಕೆ ನೀಡಿರುವ ಸರ್ವ ಸಮಾನತೆಯ ಸಂವಿಧಾನ ದೇಶದ ಬಹುದೊಡ್ಡ ಶಕ್ತಿ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅಭಿಪ್ರಾಯಪಟ್ಟಿದ್ದಾರೆ. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಡಾ ಬಿ ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ವಿಶ್ವವಿದ್ಯಾಲಯದ ಕುಲಸಚಿವ ಡಾ. ಸುರೇಶ್ ನಾಡಗೌಡರ ಪುಷ್ಪ ನಮನ ಅರ್ಪಿಸಿ ಗೌರವ ಸಲ್ಲಿಸಿದರು. ಚಿಕ್ಕಮಗಳೂರು ಜಿಲ್ಲಾಡಳಿತದ ವತಿಯಿಂದ ಡಾ: ಬಿ.ಆರ್ ಅಂಬೇಡ್ಕರ್ ಅವರ ೬೯ನೇ ಮಹಾ ಪರಿನಿರ್ವಾಣ ದಿನ ಆಚರಿಸಲಾಯಿತು. ಶಾಸಕ ಹೆಚ್.ಡಿ.ತಮ್ಮಯ್ಯ, ಜಿಲ್ಲಾಧಿಕಾರಿ ಮೀನಾ ನಾಗರಾಜ್, ಸೇರಿದಂತೆ ಅನೇಕ ಗಣ್ಯರು ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು. ಕೊಪ್ಪಳ ಜಿಲ್ಲಾಡಳಿತ ವತಿಯಿಂದ ನಡೆದ ಸಮಾರಂಭದಲ್ಲಿ ಜಿಲ್ಲಾಧಿಕಾರಿ ಡಾ.ಸುರೇಶ ಬಿ ಇಟ್ನಾಳ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

<><><><>

ರಾಜ್ಯದ ಕಾನೂನು ಸುವ್ಯವಸ್ಥೆಯ ಬಗ್ಗೆ ವಾಸ್ತವಿಕ ದತ್ತಾಂಶವನ್ನು ಬೆಳಗಾವಿ ಅಧಿವೇಶನದಲ್ಲಿ ಮಂಡಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಉತ್ತಮವಾಗಿದೆ ಎಂದು ಹೇಳಿದ್ದಾರೆ. ಧರ್ಮಸ್ಥಳ ಪ್ರಕರಣ ಕುರಿತು ವಿಶೇಷ ತನಿಖಾ ತಂಡ ತನ್ನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಸರ್ಕಾರಕ್ಕೆ ಸಲ್ಲಿಸಿದೆ. ಸದನದಲ್ಲಿ ಈ ವಿಷಯವನ್ನು ಕೈಗೆತ್ತಿಕೊಂಡರೆ ಉತ್ತರ ನೀಡುವುದಾಗಿ ತಿಳಿಸಿದ್ದಾರೆ.

<><><><>

ಕನಿಷ್ಠ ಬೆಂಬಲ ಬೆಲೆ ನಿಗದಿ ವಿಚಾರದಲ್ಲಿ ರಾಜ್ಯ ಸರ್ಕಾರ ತಮ್ಮ ಸಮಸ್ಯೆ ಬಗೆಹರಿಸಿಕೊಂಡು ಮೊದಲು ಖರೀದಿ ಕೇಂದ್ರ ತೆರೆಯಬೇಕು. ಬಳಿಕ ಕೇಂದ್ರ ಸರ್ಕಾರವನ್ನು ಪ್ರಶ್ನಿಸಬೇಕು ಎಂದು ಕೇಂದ್ರ ಉಕ್ಕು ಹಾಗೂ ಭಾರೀ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರವ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದು, ಕನಿಷ್ಠ ಬೆಂಬಲ ಬೆಲೆಯನ್ನು ಕಾರ್ಯರೂಪಕ್ಕೆ ತರುವುದು ರಾಜ್ಯ ಸರ್ಕಾರದ ಕರ್ತವ್ಯ ಎಂದು ಹೇಳಿದರು. ಮಂಡ್ಯದಲ್ಲಿನ ಮೈ ಶುಗರ್ ಶಾಲೆ ರಾಜ್ಯದಲ್ಲೇ ಮೊದಲ ಸ್ಥಾನದಲ್ಲಿರಬೇಕು ಎಂದು ತಿಳಿಸಿದ್ದಾರೆ. ಇದೇ ವೇಳೆ ಶಾಲೆಯ ಆಡಳಿತ ಮಂಡಳಿಗೆ ಕುಮಾರಸ್ವಾಮಿಯವರು ತಮ್ಮ ವೇತನದ ೧೯ ಲಕ್ಷ ೯೪ ಸಾವಿರದ ೨೦೦ ರೂಪಾಯಿ ಚೆಕ್ ಹಸ್ತಾಂತರಿಸಿದರು.

<><><><>

ನ್ಯಾಷನಲ್ ಹೆರಾಲ್ಡ್ ಹಾಗೂ ಯಂಗ್ ಇಂಡಿಯಾ ಸಂಸ್ಥೆಗಳಿಗೆ ದೇಣಿಗೆ ನೀಡಿದ್ದಕ್ಕೆ ಇಡಿ ಸಮನ್ಸ್ ನೀಡಿದ್ದು, ಈ ಮೂಲಕ ತಮಗೆ ಕಿರುಕುಳ ನೀಡಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿನ್ನೆ ತಮಗೆ ಹಾಗೂ ಸಹೋದರ ಡಿ.ಕೆ.ಸುರೇಶ್ ಅವರಿಗೆ ನೋಟಿಸ್ ನೀಡಲಾಗಿದೆ. ಸಮನ್ಸ್ ನೀಡುವ ಮೂಲಕ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಕಿರುಕುಳ ನೀಡುತ್ತಿದ್ದು, ಕಾನೂನಾತ್ಮಕವಾಗಿ ನ್ಯಾಯಾಲಯದಲ್ಲಿ ಹೋರಾಡುವುದಾಗಿ ಅವರು ಸ್ಪಷ್ಟಪಡಿಸಿದ್ದಾರೆ.

<><><><>

ತುಂಗಭದ್ರಾ ಜಲಾಶಯದ ೩೩ ಹೊಸ ಗೇಟ್‌ಗಳ ಅಳವಡಿಕೆಗೆ ಚಾಲನೆ ದೊರೆತಿದೆ. ಜಲಾಶಯದ ೫ನೇ ಗೇಟ್ ಬಳಿ ಗೇಟ್‌ಗಳ ಸ್ಥಳದಲ್ಲಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಲಾಗಿದೆ. ಕಳೆದ ವರ್ಷ ಆಗಸ್ಟ್ ತಿಂಗಳಲ್ಲಿ ೧೯ನೇ ಗೇಟ್ ಚೈನ್ ಕಳಚಿ ಬಿದ್ದಿದ್ದ ಹಿನ್ನೆಲೆ ಎಲ್ಲ ಗೇಟ್‌ಗಳನ್ನು ಜಲಾಶಯದ ತಜ್ಞರು ಪರಿಶೀಲಿಸಿ ೩೩ ಗೇಟ್‌ಗಳನ್ನು ಅಳವಡಿಸಲು ಸಲಹೆ ನೀಡಿದ್ದರು. ಹೊಸ ಗೇಟ್‌ಗಳ ಅಳವಡಿಕೆ ಕಾರ್ಯ ಶೀಘ್ರವೇ ಪೂರ್ಣವಾಗಲಿದೆ ಎಂದು ತುಂಗಭದ್ರಾ ಮಂಡಳಿಯ ಕಾರ್ಯನಿರ್ವಾಹಕ ಅಭಿಯಂತರ ಎಲ್.ಚಂದ್ರಶೇಖರ್ ತಿಳಿಸಿದ್ದಾರೆ.

<><><><>

ಮಕ್ಕಳಲ್ಲಿನ ಸೂಕ್ತ ಪ್ರತಿಭೆ ಗುರುತಿಸಿ, ಪ್ರೋತ್ಸಾಹಿಸಿ ಅವರ ಸರ್ವತೋಮುಖ ಬೆಳವಣಿಗೆಗೆ ಪ್ರತಿಭಾ ಕಾರಂಜಿ, ಕಲೋತ್ಸವ ಮುಖ್ಯ ವೇದಿಕೆಯಾಗಿದೆ ಎಂದು ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ತಿಳಿಸಿದ್ದಾರೆ ಯಾದಗಿರಿಯಲ್ಲಿ ಆಯೋಜಿಸಿದ್ದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ

ಉದ್ಘಾಟಿಸಿ ಮಾತನಾಡಿದ ಅವರು, ಕಥೆ ಹೇಳುವ, ಚಿತ್ರ ಬಿಡಿಸುವ, ಮಹಾಪುರುಷರ ವೇಷ ಧರಿಸುವ, ಜನಪದ ನೃತ್ಯ, ರಸಪ್ರಶ್ನೆ, ಮಣ್ಣಿನಿಂದ ಆಕೃತಿ ರಚನೆ, ಭರತನಾಟ್ಯ, ಕವ್ವಾಲಿ ಗಾಯನದ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮಕ್ಕಳು ಹೊಂದಿರುವ ಪ್ರತಿಭೆ ಕಾರಂಜಿ ಕಾರ್ಯಕ್ರಮಗಳ ಮೂಲಕ ಅನಾವರಣವಾಗುತ್ತದೆ ಎಂದು ಹೇಳಿದ್ದಾರೆ.

<><><><>

ಪೊಲೀಸ್ ಇಲಾಖೆಗೆ ಬೆನ್ನೆಲುಬಾಗಿ ಕೆಲಸ ಮಾಡುತ್ತಿರುವ ಗೃಹ ರಕ್ಷಕ ದಳದ ಸೇವೆ ಶ್ಲಾಘನೀಯ ಎಂದು ದಾವಣಗೆರೆ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ ಅಖಿಲ ಭಾರತ ಗೃಹರಕ್ಷಕ ದಳ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ರಕ್ಷಣೆ, ಅಭಿವೃದ್ಧಿಗೆ ಶಿಸ್ತು ಅತೀ ಮುಖ್ಯವಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಅವಶ್ಯಕತೆ ಇರುವ ಕಡೆಗಳಲ್ಲಿ ಗೃಹ ರಕ್ಷಕ ಸಿಬ್ಬಂದಿ ಬಳಕೆ ಮಾಡಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.

<><><><>

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿ ಹೆಚ್ಚಾಗಿದ್ದು, ದಿನದಿಂದ ದಿನಕ್ಕೆ ಇಲ್ಲಿನ ಜನಸಂಖ್ಯೆಯೂ ಬೆಳೆಯುತ್ತಿದೆ. ಆದರೆ, ಜನಸಂಖ್ಯೆಗೆ ಅನುಗುಣವಾಗಿ ಪಾಲಿಕೆಯಲ್ಲಿ ಅಧಿಕಾರಿಗಳ, ನೌಕರರ ಸಂಖ್ಯೆ ತೀರಾ ಕಡಿಮೆಯಿರುವ ಕುರಿತು ಚಳಿಗಾಲದ ಅಧಿವೇಶನದಲ್ಲಿ ಧ್ವನಿ ಎತ್ತಲಾಗುವುದು ಎಂದು ಶಾಸಕ ಮಹೇಶ್ ಟೆಂಗಿನಕಾಯಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾಲಿಕೆಯಲ್ಲಿನ ೨ ಸಾವಿರದ ೩೪೮ ಹುದ್ದೆಗಳ ಪೈಕಿ ೬೧೩ ಹುದ್ದೆಗಳು ಮಾತ್ರ ಭರ್ತಿಯಾಗಿದ್ದು, ಇನ್ನುಳಿದ ೧ ಸಾವಿರದ ೪೩೫ ಹುದ್ದೆಗಳು ಖಾಲಿ ಇವೆ ಎಂದು ಮಾಹಿತಿ ನೀಡಿದ್ದಾರೆ.

<><><><>

ವಿಶಾಖಪಟ್ಟಣಂನಲ್ಲಿಂದು ಭಾರತ - ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಮೂರನೇ ಏಕದಿನ ಪಂದ್ಯದಲ್ಲಿ ಭಾರತ ತಂಡದ ನಾಯಕ ಕೆ.ಎಲ್. ರಾಹುಲ್ ಟಾಸ್ ಗೆದ್ದು ಫೀಲ್ಡಿಂಗ್ ಆಯ್ದುಕೊಂಡಿದ್ದಾರೆ. ಭಾರತ ತಂಡದಲ್ಲಿ ವಾಷಿಂಗ್ಟನ್ ಸುಂದರ್ ಬದಲು ತಿಲಕ್ ವರ್ಮ ಸ್ಥಾನ ಪಡೆದಿದ್ದಾರೆ. ಇತ್ತೀಚಿನ ವರದಿ ಬಂದಾಗ ದಕ್ಷಿಣ ಆಫ್ರಿಕಾ ೧೧.೩ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೮೦ ರನ್ ಗಳಿಸಿ ಆಡುತ್ತಿದೆ.

<><><><>

ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವ ವಿದ್ಯಾಲಯದಲ್ಲಿ ಎರಡು ದಿನಗಳ ಕಾಲ ಅಂತರ್‌ಕಾಲೇಜು ಯುವಜನೋತ್ಸವ ಇಂದು ಆರಂಭಗೊಂಡಿದೆ. ವಿಶ್ವವಿದ್ಯಾಲಯ ವ್ಯಾಪ್ತಿಯ ೩೦ ಕಾಲೇಜುಗಳ ೮೦೦ ವಿದ್ಯಾರ್ಥಿಗಳು ೧೮ ಕಲಾ ಪ್ರಕಾರಗಳಲ್ಲಿ ತಮ್ಮ ಪ್ರತಿಭಾ ಪ್ರದರ್ಶನ ನಡೆಸುತ್ತಿದ್ದಾರೆ. ಯುವಜನೋತ್ಸವ ಉದ್ಘಾಟನೆ ಮಾಡಿ ಮಾತನಾಡಿದ ಲಂಬಾಣಿ ಕಸೂತಿ ಕಲೆಯ ಖ್ಯಾತ ಕಲಾಗಾರ್ತಿ ರಾಷ್ಟ್ರ, ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಡೂರಿನ ಶಾಂತಿಬಾಯಿ. ನಾನು ಓದಿದ್ದು ಮೂರನೇ ತರಗತಿ ಅಷ್ಟೇ ಆದರೂ, ನಾನು ಕಲೆಯ ಕೌಶಲ್ಯದಿಂದ ಹತ್ತಾರು ದೇಶಗಳಲ್ಲಿ ಸಂಚರಿಸುವ ಭಾಗ್ಯದೊರೆತಿದೆ ಎಂದು ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>